# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಇಲಾಖೆಯ 2016-17ನೇ ಸಾಲಿನ ರಾಜ್ಯವಲಯ ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡಗಳಿಗೆ ನೆರಳು ಪರದೆ (Shade Net) ಅನುಷ್ಟಾನ ಮಾಡಲು ಅನುಮೋದನೆ ನೀಡುವ ಬಗ್ಗೆ

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಕೃಇ 73 ಕೃಯೋಕಾ 2016, ದಿನಾಂಕ:05-05-2016. 2
2) ಸರ್ಕಾರದ ಪತ್ರ ಸಂಖ್ಯೆ:ಕೃಇ 146 ಕೃಯೋಕಾ 2015, ದಿ:03-06-2016
3) ಕೃಷಿ ನಿರ್ದೇಶಕರ ಪತ್ರ ಸಂಖೆ:ಉಕೃನಿ(ಕೃ.ಭಾ)/ಸ.ಪ/2015-16, ದಿ:25-06-2016

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2015-16ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2016-17ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಪತ್ರದಲ್ಲಿ, ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡಗಳಿಗೆ supporting stone ಮತ್ತು ನೆರಳು ಪರದೆ ಅಳವಡಿಸಲು ಕೃಷಿ ಹೊಂಡದ ಅಳತೆಗೆ ಬೇಕಾಗುವ ಅಂದಾಜು ಮೊತ್ತದ ಶೆ.50 ರಷ್ಟು ಸಹಾಯಧನವನ್ನು ಎಲ್ಲಾ ವರ್ಗದ ರೈತರಿಗೆ ಮಾರುಕಟ್ಟೆಯಲ್ಲಿ ದೊರೆಯುವ ಐಎಸ್‌ಐ ಅಥವಾ ತತ್ಸಮಾನ ಮಾನದಂಡದ ಅಧೀಕೃತ ಸಂಸ್ಥೆಯ ನೆರಳು ಪರದೆಯನ್ನು ರೈತರಿಗೆ ವಿತರಿಸಲು ಸರ್ಕಾರವು ಅನುಮತಿ ನೀಡಲಾಗಿರುತ್ತದೆ.

ಮೇಲೆ (3) ರಲ್ಲಿ ಓದಲಾದ ಕೃಷಿ ನಿರ್ದೇಶಕರ ಪ್ರಸ್ತಾವನೆಯಲ್ಲಿ,ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಕೃಷಿ ಹೊಂಡಗಳಿಗೆ IS 16008-2012 (Shadenets for Agriculture and Horticulture purpose) ಪ್ರಕಾರ, ಶೇ.50, ಶೇ.75 ಮತ್ತು ಶೇ.90ರ ನೆರಳು ಪರದೆಗಳಿಗೆ ಮಾತ್ರ ವಿಶಿಷ್ಟನೆಗಳನ್ನು ನಿಗದಿಗೊಳಿಸಲಾಗಿದ್ದು, ಶೇ.60ರ ನೆರಳು ಪರದೆಗೆ ವಿಶಿಷ್ಟನೆಗಳನ್ನು ಐಎಸ್‌ಐ ನಿಗಧಿಗೊಳಿಸಿರುವುದಿಲ್ಲವೆಂದು ತಿಳಿಸುತ್ತಾ, ಕೃಷಿ ನಿರ್ದೇಶಕರು, ಪ್ರಸ್ತಾವನೆಯಲ್ಲಿ ಶೇ.60ರ ನೆರಳು ಪರದೆಗೆ ಬದಲಾಗಿ, ಶೇ.50ರ IS 16008 2012, 100 GSM ನೆರಳು ಪರದೆಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕೃಇ 146 ಕೃಯೋಕಾ 2015, ಬೆಂಗಳೂರು, ದಿನಾಂಕ:23.01.2017.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಕೃಷಿ ಹೊಂಡಗಳಿಗೆ **ಶೇ.60ರ** ನೆರಳು ಪರದೆಗೆ ಬದಲಾಗಿ **ಶೇ.50ರ IS 16008-2012, 100-GSM** ನೆರಳು **ಪರದೆಯನ್ನು** ಕೃಷಿ ಹೊಂಡದ ಅಳತೆಗೆ ಬೇಕಾಗುವ ಅಂದಾಜು ಮೊತ್ತದ ಶೇ.50 ರಷ್ಟು ಸಹಾಯಧನವನ್ನು ಅಧಿಕೃತ ಸಂಸ್ಥೆಯ ನೆರಳು ಪರದೆಯನ್ನು ಎಲ್ಲಾ ವರ್ಗದ ರೈತರಿಗೆ ಪಾವತಿಸಲು ಅನುಮೋದನೆ ನೀಡಲಾಗಿದೆ.

--2

ಇದಕ್ಕೆ ತಗುಲುವ ವೆಚ್ಚವನ್ನು 2016-17ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ- **2401-00-102-0-27(ಯೋಜನೆ)** ರಡಿ ಕೃಷಿ ಭಾಗ್ಯ ಯೋಜನೆಯಡಿ ಪೂರಕ ಅಂದಾಜು-2 ರಲ್ಲಿ ಈಗಾಗಲೇ ಬಿಡುಗಡೆಯಾಗಿರುವ ಅನುದಾನದಿಂದ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಎಸ್.ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

ಪ್ರತಿಯನ್ನು:-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್‌ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ -1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
8. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
9. ಸರ್ಕಾರಧ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು
10. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
11. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
12. ಸರ್ಕಾರದ ಕಾರ್ಯದರ್ಶಿ (ಆಹಾರ ಸಂಸ್ಕರಣೆ ಹಾಗೂ ಕಟಾವು ತಂತ್ರಜ್ಞಾನ), ಕೃಷಿ ಇಲಾಖೆ, ಇವರ ಆಪ್ತ ಶಾಖೆ.
13. ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
14. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
15. ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
16. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು ರವರಿಗೆ ಮಾಹಿತಿಗಾಗಿ ನೀಡಲಾಗಿದೆ.(ಕೃಷಿ ಆಯುಕ್ತರ ಮುಖಾಂತರ).
17. ಶಾಖಾಧಿಕಾರಿ, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
18. ಪ್ರತಿಯನ್ನು ಕಡತ ಸಂಖ್ಯೆ:ಕೃಇ 81 ಕೃಯೋಕಾ 2016 ರಲ್ಲಿ
19. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.